ಕರ್ನಾಟಕ ಸರ್ಕಾರ
<u>ತಾಂತ್ರಿಕ ಶಿಕ್ಷಣ ಇಲಾಖೆ</u>

ಸಂಖ್ಯೆ: ಬಿಟಿಇ/11/ಇಸಿಎಸ್(2)/2016

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ: 25-01-2017

<u>ಸುತ್ತೋಲೆ</u>

ವಿಷಯ: 2016 ರ ನವೆಂಬರ್/ಡಿಸೆಂಬರ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ/ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.
ಉಲ್ಲೇಖ:ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/11/ಇಸಿಎಸ್(2)/2016 ದಿನಾಂಕ:21-01-2017

**********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, 2016 ರ ನವೆಂಬರ್/ಡಿಸೆಂಬರ್ ತಿಂಗಳನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಮತ್ತು ಮರು ಮೌಲ್ಯಮಾಪನಕ್ಕಾಗಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ದಿ:25-01-2017 ರವರೆಗೆ ಕಾಲಾವಕಾಶ ನಿಗದಿಪಡಿಸಲಾಗಿತ್ತು.

ಕೆಲವೊಂದು ತಡೆಹಿಡಿದ ಫಲಿತಾಂಶಗಳನ್ನು ಬಿಡುಗಡೆಗೊಳಿಸಿರುವ ಹಿನ್ನೆಲೆಯಲ್ಲಿ, ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಮತ್ತು ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಕೊನೆಯ ಕಾಲಾವಕಾಶವನ್ನು <u>ದಿನಾಂಕ: 28-01-2017 ರ ಸಂಜೆ 5-00</u> ಗಂಟೆಯವರೆಗೆ ವಿಸ್ತರಿಸಲಾಗಿದ್ದು, ವಿದ್ಯಾರ್ಥಿಗಳು/ಪೋಷಕರು/ಸಂಸ್ಥೆಗಳ ಪ್ರಾಚಾರ್ಯರುಗಳು ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ. ಈಗಾಗಲೇ ಮರುಮೌಲ್ಯಮಾಪನ/ ಫೋಟೋ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇಲಿಂಕ್ಸ್ ನಲ್ಲಿ ಆನ್‌ಲೈನ್ ಅಪ್‌ಡೇಟ್ ಮಾಡಿರುವ ಕುರಿತು ಖಾತ್ರಿ ಪಡಿಸಿಕೊಂಡು ಮುಂದಿನ ಅಗತ್ಯ ಕ್ರಮ ಕೈಗೊಳ್ಳಲು ಸಂಸ್ಥೆಯ ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ - ವೆಬ್‌ಪೋರ್ಟಲ್ ನಲ್ಲಿ ಪ್ರಕಟಿಸಲು
3) ನಿರ್ದೇಶಕರ ಆಪ್ತ ಶಾಖೆ
4) ಕಾರ್ಯದರ್ಶಿಯವರ ಆಪ್ತ ಶಾಖೆ
5) ಕಡತಕ್ಕೆ